# ಕಬಡ್ಡಿ ತನ್ನದೇ ವ್ಯಾಪಕತೆ ಪ್ರಸಿದ್ಧಿ ಪಡೆಯುತ್ತಿದೆ



**ವಿಕ ಸುದ್ದಿಲೋಕ** ಕಾರ್ಕಳ

ಮಂಜುನಾಥ ಪೈ ಸ್ಮಾರಕ ಸರಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಮಂಗಳೂರು ವಿ.ವಿ. ಜಂಟಿಯಾಗಿ ಆಯೋಜಿಸಿದ್ದ ಪ್ರಸಕ್ತ ಶೈಕ್ಷಣಿಕ ವರ್ಷದ ಅಂತರ್‌ಕಾಲೇಜು ಮಹಿಳಾ ಕಬಡ್ಡಿ ಚಾಂಪಿಯನ್‌ಶಿಪ್ ಪಂದ್ಯಾವಳಿಯ ಉದ್ಘಾಟನೆ ಪೆರ್ವಾಜೆಯ ನಾರಾಯಣಗುರು ಸಭಾಭವನದಲ್ಲಿ ಸೋಮವಾರ ನಡೆಯಿತು.

**ಮಹಿಳಾ ಕಬಡ್ಡಿ ಚಾಂಪಿಯನ್‌ಶಿಪ್ ಶಾಸಕ ಸುನಿಲ್ ಉದ್ಘಾಟಿಸಿದರು**

ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ, ಶಾಸಕ ವಿ. ಸುನಿಲ್ ಕುಮಾರ್ ಉದ್ಘಾಟಿಸಿ, ಖ್ಯಾತ ಕಬಡ್ಡಿ ಆಟಗಾರರನ್ನು ರಾಜ್ಯಕ್ಕೆ, ರಾಷ್ಟ್ರಕ್ಕೆ ನೀಡಿದ ಕೀರ್ತಿ ಕಾರ್ಕಳಕ್ಕಿದೆ. ಏಷ್ಯನ್ ಗೇಮ್ಸ್‌ನಲ್ಲಿ ಭಾರತವನ್ನು ಪ್ರತಿನಿಧಿಸಿದ್ದ ಮಹಿಳಾ ಕಬಡ್ಡಿ ತಂಡದ ಕ್ಯಾಪ್ಟನ್ ಮಮತಾ ಪೂಜಾರಿ, ಕ್ರೀಡಾಳು ಸುಕೇಶ್ ಹೆಗ್ಡೆ ಕಾರ್ಕಳದವರು ಎನ್ನುವುದು ಹೆಮ್ಮೆಯ ವಿಚಾರ. ಹಿಂದೆಲ್ಲ ಗ್ರಾಮೀಣ ಭಾಗದಲ್ಲಿ ಕ್ರಿಕೆಟ್, ವಾಲಿಬಾಲ್‌ಗಳಿಗಷ್ಟೇ ಪ್ರಾಮುಖ್ಯತೆಯಿತ್ತು. ಇತ್ತೀಚಿನ ವರ್ಷಗಳಲ್ಲಿ ಕಬಡ್ಡಿ ತನ್ನದೇ ಆದ ವ್ಯಾಪಕತೆ ಹಾಗೂ ಪ್ರಸಿದ್ಧಿ ಪಡೆಯುತ್ತಿದೆ. ತಾಲೂಕಿನಲ್ಲಿ ಮೊದಲ ಬಾರಿಗೆ ವಿವಿ ಮಟ್ಟದ ಕ್ರೀಡೆ ನಡೆಯುತ್ತಿರುವುದು ಸಂತಸದ ವಿಷಯ. ನಾವೆಲ್ಲ ಕ್ರೀಡಾ ಸ್ಫೂರ್ತಿಯಿಂದ ಭಾಗವಹಿಸಬೇಕು ಎಂದರು.

ಅಂತಾರಾಷ್ಟ್ರೀಯ ಕ್ರೀಡಾಪಟು, ಚಿತ್ರನಟ ರೋಹಿತ್ ಕುಮಾರ್ ಕಟೀಲು ಮಾತನಾಡಿ, ನೀವು ವಿಶ್ವವಿದ್ಯಾನಿಲಯ ಮಟ್ಟಕ್ಕಷ್ಟೇ ಸೀಮಿತಗೊಳ್ಳದೆ, ಕೇಂದ್ರ ಹಾಗೂ ರಾಜ್ಯ ಸರಕಾರ ನೀಡುವ ಸವಲತ್ತು ಬಳಸಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಿಂಚಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಿನ್ಸಿಪಾಲ್ ಶ್ರೀವರ್ಮ ಅಜ್ರಿ ಮಾತನಾಡಿ, ವಿವಿ ಮಟ್ಟದ ಪಂದ್ಯಾವಳಿ ಆಯೋಜಿಸುವ ಅವಕಾಶ ನಮ್ಮ ಸರಕಾರಿ ಕಾಲೇಜಿಗೆ ಲಭಿಸಿದ್ದು ಹೆಮ್ಮೆಯ ವಿಷಯ ಎಂದರು.

ಕಟೀಲು ಇಂಟರ್‌ನ್ಯಾಷನಲ್ ಹೋಟೆಲ್‌ನ ಆಡಳಿತ ಪಾಲುದಾರ ಡಿ. ಆರ್. ರಾಜು ಮಾತನಾಡಿ, ವ್ಯಕ್ತಿಯ ಮಾನಸಿಕ ಹಾಗೂ ದೈಹಿಕ ಸದೃಢತೆಗೆ ಕ್ರೀಡೆ ಅವಶ್ಯ. ಸೋಲು ಗೆಲುವುಗಳನ್ನು ಸಂತೋಷದಿಂದ ಸ್ವೀಕರಿಸಿ ಎಂದರು.

ಮಂಗಳೂರು ವಿ.ವಿ. ದೈಹಿಕ ಶಿಕ್ಷಣ ವಿಭಾಗದ ಹರಿದಾಸ್ ಕೂಳೂರು ಹಾಗೂ ಕಾಲೇಜಿನ ಕ್ರೀಡಾ ಕಾರ್ಯದರ್ಶಿ ವಿಘ್ನೇಶ್ ಉಪಸ್ಥಿತರಿದ್ದರು. ಎರಡು ದಿನಗಳ ಕಾಲ ನಡೆಯುವ ಈ ಪಂದ್ಯಾವಳಿಯಲ್ಲಿ 30 ತಂಡಗಳು ಭಾಗವಹಿಸಿದ್ದು, ಕಾರ್ಕಳದಲ್ಲಿ ಜರಗಿದ ಮೊದಲ ವಿವಿ ಮಟ್ಟದ ಮಹಿಳಾ ಕಬಡ್ಡಿ ಪಂದ್ಯಾವಳಿ ಇದಾಗಿದೆ.

> **ಹತ್ತು ಹದಿನೈದು ವರ್ಷಗಳ ಹಿಂದೆ ಕಬಡ್ಡಿಗೆ ಪ್ರೋತ್ಸಾಹ ನೀಡುವವರಿರಲಿಲ್ಲ, ಕ್ರೀಡಾಳುಗಳ ಹೆತ್ತವರೂ ಪ್ರೋತ್ಸಾಹ ಕೊಡುತ್ತಿರಲಿಲ್ಲ, ಇತ್ತೀಚೆಗೆ ಬಾಲಿವುಡ್‌ನ ಸಿನಿಮಾ ನಟರು ಕಬಡ್ಡಿಗೆ ಪ್ರಾಯೋಜಕತ್ವ ನೀಡಿದ್ದರ ಪರಿಣಾಮ ಕಬಡ್ಡಿ ವಿಶ್ವದಾದ್ಯಂತ ಜನಪ್ರಿಯತೆ ಪಡೆಯುತ್ತಿದೆ. ಇದು ನಿಜಕ್ಕೂ ಹೆಮ್ಮೆಯ ವಿಷಯ.**
>
> **-ರೋಹಿತ್ ಕುಮಾರ್ ಕಟೀಲು**

ವಾಣಿಜ್ಯ ವಿಭಾಗದ ಮುಖ್ಯಸ್ಥೆ ಜ್ಯೋತಿ ಎಲ್. ಜನ್ನೆ ಕಾರ್ಯಕ್ರಮ ನಿರೂಪಿಸಿದರು. ಸ್ನಾತಕೋತ್ತರ ವಿಭಾಗದ ಸಂಚಾಲಕ ವಿದ್ಯಾಧರ ಹೆಗ್ಡೆ ವಂದಿಸಿದರು. ಸಭಾ ಕಾರ್ಯಕ್ರಮದ ನಂತರ ಕ್ರೀಡಾಳುಗಳೊಂದಿಗೆ ಅಂಗಣದಲ್ಲಿ ಕಬಡ್ಡಿ ಆಡುವ ಮೂಲಕ ರೋಹಿತ್ ಕುಮಾರ್ ಕಟೀಲು ಪಂದ್ಯಾವಳಿಗೆ ಸಾಂಕೇತಿಕ ಚಾಲನೆ ನೀಡಿದರು.